✓

# ಕರ್ನಾಟಕವಿಧಾನಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 213 (214)

2) ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

3) ಉತ್ತರಿಸಬೇಕಾದ ದಿನಾಂಕ: : 18.08.2026

4) ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಧಾರವಾಡ ಮತ್ತು ಬೆಳಗಾವಿ ನಡುವಿನ ನೇರ ರೈಲ್ವೆ ಮಾರ್ಗ ನಿರ್ಮಾಣ ಯೋಜನೆ ಯಾವ ಹಂತದಲ್ಲಿದೆ: ಈ ಯೋಜನೆಗೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಆಗಿರುವ ಪ್ರಗತಿ ಏನು; (ವಿವರ ನೀಡುವುದು) | ಧಾರವಾಡ ಮತ್ತು ಬೆಳಗಾವಿ ನೂತನ ರೈಲು ಮಾರ್ಗ ನಿರ್ಮಾಣ ಯೋಜನೆಗೆ ಸಂಬಂಧಿಸಿದಂತೆ ಭೂಸ್ವಾಧೀನಪಡಿಸಿಕೊಂಡ ಜಮೀನುಗಳ ಪ್ರಾಥಮಿಕ ಮತ್ತು ಅಂತಿಮ ಅಧಿಸೂಚನೆ ಹೊರಡಿಸಿ, ಭೂ ಬೆಲೆ ನಿರ್ಧರಣೆಯಾಗಿದ್ದು, ಭೂಸಾಧೀನಪಡಿಸಿಕೊಂಡ ಜಮೀನುಗಳ ಭೂ ಮಾಲೀಕರುಗಳಿಗೆ ಭೂ ಪರಿಹಾರ ಪಾವತಿಸುವ ಕಾರ್ಯ ಚಾಲ್ತಿಯಲ್ಲಿರುತ್ತದೆ. |
| (ಆ) | ಈ ಯೋಜನೆಗಾಗಿ ಒಟ್ಟು ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಬೇಕಾಗಿದೆ; ಇದರಲ್ಲಿ ಎಷ್ಟು ಎಕರೆ ಭೂಮಿಯನ್ನು ಈಗಾಗಲೇ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ ಮತ್ತು ಬಾಕಿ ಉಳಿದಿರುವ ಭೂಸ್ವಾಧೀನ ಪ್ರಕ್ರಿಯೆ ಯಾವಾಗ ಪೂರ್ಣಗೊಳ್ಳಲಿದೆ; | ಈ ಯೋಜನೆಗಾಗಿ ಒಟ್ಟು 1523.21 ಎಕರೆಗಳ ಜಮೀನಿನ ಅಗತ್ಯವಿದ್ದು, ಜಿಲ್ಲಾವಾರು ಮಾಹಿತಿ ಈ ಕೆಳಕಂಡಂತಿದೆ:<br>ಧಾರವಾಡ ಜಿಲ್ಲೆ – 382.38 ಎಕರೆಗಳು<br>ಬೆಳವಾವಿ ಜಿಲ್ಲೆ - 1140.23 ಎಕರೆಗಳು.<br><br>ಈ ಯೋಜನೆಯ ಭೂಸ್ವಾಧೀನ ಜಮೀನಿಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿದ್ದು, ಭೂ ಪರಿಹಾರ ಪಾವತಿಸಿದ ನಂತರ ರೈಲ್ವೆ ಇಲಾಖೆಗೆ ಹಸ್ತಾಂತರಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು. |
| (ಇ) | ಈ ಯೋಜನೆಗೆ ರಾಜ್ಯ ಸರ್ಕಾರದ ಪಾಲಿನ ಒಟ್ಟು ಅನುದಾನ ಎಷ್ಟು; ಇಲ್ಲಿಯವರೆಗೆ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಮತ್ತು ಬಳಕೆಯಾದ ಮೊತ್ತ ಎಷ್ಟು; | ಈ ಯೋಜನೆಗೆ ರಾಜ್ಯ ಸರ್ಕಾರದ ಪಾಲಿನ ಒಟ್ಟು ಅನುದಾನ 537.83 ಕೋಟಿಗಳು. ಇದರಲ್ಲಿ ಭೂ ಪರಿಹಾರಕ್ಕಾಗಿ ಇಲ್ಲಿಯವರೆಗೆ ರೂ.110 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |
| (ಈ) | ಈ ರೈಲ್ವೆ ಮಾರ್ಗವು ಅರಣ್ಯ ಪ್ರದೇಶದ ಮೂಲಕ ಹಾದು ಹೋಗುತ್ತದೆಯೇ; ಹಾಗಿದ್ದಲ್ಲಿ, ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಅಗತ್ಯವಿರುವ ಅನುಮತಿಗಳನ್ನು ಪಡೆಯಲಾಗಿದೆಯೇ; ವಿಳಂಬವಾಗಿದ್ದರೆ ಅದಕ್ಕೆ ಕಾರಣಗಳೇನು; | ಅಧಿಸೂಚನೆಯಂತೆ ಯಾವುದೇ ಅರಣ್ಯ ಪ್ರದೇಶ ಭೂಸ್ವಾಧೀನಕ್ಕೆ ಒಳಪಟ್ಟಿರುವುದಿಲ್ಲ. |

| | | |
|---|---|---|
| (ಉ) | ಈ ಪ್ರಮುಖ ರೈಲ್ವೆ ಯೋಜನೆಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸಿ ಸರ್ಕಾರ ಯಾವ ಕಾಲ ಮಿತಿಯೊಳಗೆ ಸಾರ್ವಜನಿಕರ ಸಂಚಾರಕ್ಕೆ ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳುವುದು? | ಈ ಯೋಜನೆಗೆ ಸಂಬಂಧಪಟ್ಟ ಸಂಪೂರ್ಣ ಜಮೀನನ್ನು ಭೂಸ್ವಾಧೀನಪಡಿಸಿಕೊಂಡು ಹಸ್ತಾಂತರಿಸಿದ ನಂತರದ ಮುಂದಿನ 24 ತಿಂಗಳುಗಳಲ್ಲಿ ಸದರಿ ಯೋಜನೆಯನ್ನು ಸಂಪೂರ್ಣವಾಗಿ ಕಾರ್ಯಗತಗೊಳಿಸುವುದಾಗಿ ನೈರುತ್ಯ ರೈಲ್ವೆಯು ವರದಿ ನೀಡಿರುತ್ತದೆ. |

ಸಂಖ್ಯೆ: ಮೂಅಇ 254 ರಾರಾಹೆ 2026

**(ಎಂ.ಬಿ. ಪಾಟೀಲ)**

ಬೃಹತ್ ಮತ್ತು ಮಧ್ಯಮ ಕೈಗಾರಿಕೆ

ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.